# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಸೋಮವಾರ, ದಿನಾಂಕ:10ನೇ ಜುಲೈ, 2023**

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

* * *

## 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಐದನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಐದನೆಯ ಪಟ್ಟಿ

## 02. ಚುನಾವಣಾ ಪ್ರಸ್ತಾವ

**ಶ್ರೀ ಎನ್.ಎಸ್. ಬೋಸ್‌ರಾಜು (ಮಾನ್ಯ ಸಭಾನಾಯಕರು ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು) ಅವರು:–**

ಅ. "ವಿಧಾನ ಮಂಡಲದ/ವಿಧಾನ ಪರಿಷತ್ತಿನ ವಿವಿಧ ಸಮಿತಿಗಳಿಗೆ, ಚುನಾವಣೆ ನಡೆಸುವ ಬದಲು ಮಾನ್ಯ ಸದಸ್ಯರುಗಳನ್ನು ನಾಮ ನಿರ್ದೇಶಿಸಲು ಮಾನ್ಯ ಸಭಾಪತಿಯವರಿಗೆ ಅಧಿಕಾರ ನೀಡುವ ಬಗ್ಗೆ ಪ್ರಸ್ತಾವವನ್ನು ಮಂಡಿಸುವುದು".

ಆ. "ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯದ ಸೆನೆಟ್‌ಗೆ ಹಾಗೂ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ವ್ಯವಸ್ಥಾಪನಾ ಮಂಡಳಿಗೆ ಚುನಾವಣೆ ನಡೆಸುವ ಬದಲು ಮಾನ್ಯ ಸಭಾಪತಿಯವರಿಗೆ ಅಧಿಕಾರ ನೀಡುವ ಬಗ್ಗೆ ಪ್ರಸ್ತಾವವನ್ನು ಮಂಡಿಸುವುದು".

## 03. ಸದನ ಸಮಿತಿಯ ಕಾಲಾವಕಾಶವನ್ನು ವಿಸ್ತರಿಸುವ ಪ್ರಸ್ತಾವ

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಅಧ್ಯಕ್ಷರು, ವಿಶೇಷ ಸದನ ಸಮಿತಿ) ಅವರು:–**

"ರಾಜ್ಯದ ವಿವಿಧ ನಿಗಮಗಳಲ್ಲಿ ಗಂಗಾ ಕಲ್ಯಾಣ ಯೋಜನೆಯಡಿ ಕೈಗೊಂಡಿರುವ ಕಾಮಗಾರಿಗಳಲ್ಲಿ ನಡೆದಿರುವ ಅವ್ಯವಹಾರಗಳ ಸಂಬಂಧ ಪರಿಶೀಲಿಸಿ ವರದಿಯನ್ನು ಸಲ್ಲಿಸಲು ರಚಿಸಲಾಗಿರುವ ವಿಶೇಷ ಸದನ ಸಮಿತಿಯು ತನ್ನ ವರದಿಯನ್ನು ಸಲ್ಲಿಸಲು ದಿನಾಂಕ:22.04.2023ರಿಂದ 06 ತಿಂಗಳುಗಳ ಕಾಲಾವಕಾಶವನ್ನು ಸದನದ ಸಹಮತಿಯನ್ನು ಕಾಯ್ದಿರಿಸಿ ವಿಸ್ತರಿಸಲಾಗಿರುವ ಪ್ರಸ್ತಾವನೆಗೆ ಸದನದ ಸಹಮತಿ ಕೋರಿ ಪ್ರಸ್ತಾವವನ್ನು ಮಂಡಿಸುವುದು".

.2..

## 04. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವದ ಮೇಲಿನ ಮುಂದುವರೆದ ಚರ್ಚೆ

"2023ನೇ ಜುಲೈ, 03ರಂದು ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಶಾಸಕರುಗಳನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನ ಪರಿಷತ್ತಿನ ಶಾಸಕರಾದ ನಾವು ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ" ಎಂದು ದಿನಾಂಕ:05.07.2023ರಂದು **ಶ್ರೀ ಯು.ಬಿ. ವೆಂಕಟೇಶ್** ರವರು ಸೂಚಿಸಿ **ಶ್ರೀ ಎಂ. ನಾಗರಾಜು** ಅವರು ಅನುಮೋದಿಸಿರುವ ಪ್ರಸ್ತಾವದ ಮೇಲೆ ಚರ್ಚೆ:

**ಮೂರನೇ ದಿನ**

## 05. ಗಮನ ಸೆಳೆಯುವ ಸೂಚನೆಗಳು

01. **ಶ್ರೀ ನಿರಾಣಿ ಹಣಮಂತ್ ರುದ್ರಪ್ಪ** ಅವರು ಕೃಷ್ಣಾ ಮೇಲ್ದಂಡೆ ಯೋಜನೆಯಡಿಯಲ್ಲಿ ನಿರ್ಮಾಣವಾದ ಆಲಮಟ್ಟಿ ಜಲಾಶಯ ಹಿನ್ನೀರಿನಿಂದ ಭೂಮಿಯನ್ನು ಕಳೆದುಕೊಂಡ ಸಂತ್ರಸ್ಥರಿಗೆ ಭೂಪರಿಹಾರ ಧನವನ್ನು ಮಂಜೂರು ಮಾಡದಿರುವುದರಿಂದ ಹಾಗೂ ಪುನರ್ ವಸತಿ, ಪುನರ್ ನಿರ್ಮಾಣ ಕೇಂದ್ರಗಳಲ್ಲಿ ಮಂಜೂರಾದ ಕಾಮಗಾರಿಗಳನ್ನು ಪ್ರಾರಂಭಿಸದಿರುವುದರಿಂದ ಸಂತ್ರಸ್ಥರಿಗೆ ಆಗುತ್ತಿರುವ ತೊಂದರೆಗಳ ಬಗ್ಗೆ ಮಾನ್ಯ ಉಪ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

02. **ಶ್ರೀ ಡಿ.ಎಸ್. ಅರುಣ್** ಅವರು ಆನ್‌ಲೈನ್ ಡ್ರೀಮ್ 11 ಮೈ 11 ಸರ್ಕಲ್ ಹಾಗೂ ಇನ್ನಿತರೆ ಆ್ಯಪ್‌ಗಳಿಂದ ಆಗುತ್ತಿರುವ ಅನಾನುಕೂಲತೆಗಳು ಹಾಗೂ ಆನ್‌ಲೈನ್ ಮೂಲಕ ಸಾರ್ವಜನಿಕರಿಗೆ ಸಾಲ ನೀಡಿ ಮಾನಸಿಕ ಕಿರುಕುಳ ನೀಡುತ್ತಿರುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

03. **ಶ್ರೀ ತಿಪ್ಪಣ್ಣಪ್ಪ** ಅವರು ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗಾಗಿ ವಸತಿ ನಿಲಯಗಳ ಸಂಖ್ಯೆಯನ್ನು ಹೆಚ್ಚಿಸಿ ಸ್ವಂತ ಕಟ್ಟಡಗಳ ನಿರ್ಮಾಣ ಹಾಗೂ ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳಿಗೆ ಪ್ರವೇಶಾತಿಯನ್ನು ಕಲ್ಪಿಸುವ ಬಗ್ಗೆ ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

## 06. ನಿಯಮ 330ರ ಮೇರೆಗೆ

01. **ಶ್ರೀ ಮಂಜುನಾಥ ಭಂಡಾರಿ** ಅವರು ಇತ್ತೀಚೆಗೆ ಕರ್ನಾಟಕದಲ್ಲಿ ಗರ್ಭಿಣಿ ಸ್ತ್ರೀಯರು ಪ್ರಸವ ಸಂದರ್ಭದಲ್ಲಿ ಅತಿ ಹೆಚ್ಚು ಮರಣ ಪ್ರಮಾಣ ದಾಖಲಾಗಿದ್ದು, ಮಹಿಳೆ ಹಾಗೂ ಮಕ್ಕಳ ಸರ್ವತೋಮುಖ ಅಭಿವೃದ್ಧಿಗಾಗಿ ಇರುವ ಯೋಜನೆಗಳ ಅನುಷ್ಠಾನದಲ್ಲಿರುವ ತೊಡಕುಗಳು ಹಾಗೂ ಪ್ರಾದೇಶಿಕ ಭಿನ್ನತೆಗಳ ಕುರಿತು ಪ್ರಸ್ತಾಪಿಸುವುದು.

.3..

೦೨. **ಶ್ರೀ ಮರಿತಿಬ್ಬೇಗೌಡ** ಅವರು ಸಮಾಜ ಕಲ್ಯಾಣ ಇಲಾಖೆಯಡಿ ಕ್ರೈಸ್ ವತಿಯಿಂದ ನಡೆಯುತ್ತಿರುವ ವಸತಿ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಯಂ ಶಿಕ್ಷಕರಿಗೆ ಡಿ.ಸಿ.ಆರ್.ಜಿ., ಕೆ.ಜಿ.ಐ.ಡಿ., ಜ್ಯೋತಿ ಸಂಜೀವಿನಿ, ಆರೋಗ್ಯ ಸೌಲಭ್ಯ ವಿಸ್ತರಣೆ ಹಾಗೂ ವಸತಿ ಶಾಲೆಗಳ ಉನ್ನತೀಕರಣ ಮಾಡದಿರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು ಪ್ರಸ್ತಾಪಿಸುವುದು.

೦೩. **ಶ್ರೀ ಮುನಿರಾಜುಗೌಡ ಪಿ.ಎಂ** ಅವರು ಕೋಲಾರ ಗೃಹ ನಿರ್ಮಾಣ ಸಹಕಾರ ಸಂಘ ಮಾರಾಟಕ್ಕೆ ನಿಗದಿಪಡಿಸಿದ ಬೆಲೆಗಿಂತ ಕಡಿಮೆ ಬೆಲೆಯಲ್ಲಿ ನಿವೇಶನವನ್ನು ನೋಂದಣಿ ಮಾಡಿಸಿರುವುದರಿಂದ ಸರ್ಕಾರದ ಬೊಕ್ಕಸಕ್ಕೆ ನಷ್ಟ ಉಂಟಾಗಿರುವ ಕುರಿತು ಪ್ರಸ್ತಾಪಿಸುವುದು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**